ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಆರ್. ಧರ್ಮಸೇನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1111
ಉತ್ತರಿಸಬೇಕಾದ ದಿನಾಂಕ	:	21.09.2021
ಉತ್ತರಿಸಬೇಕಾದ ಸಚಿವರು	:	ಸಹಕಾರ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳು ಅಸ್ತಿತ್ವದಲ್ಲಿವೆ; ಅವುಗಳಲ್ಲಿ ಅತ್ಯುತ್ತಮವಾಗಿ ಕೆಲಸ ಮಾಡುತ್ತಿರುವ ಸಹಕಾರ ಸಂಘಗಳೆಷ್ಟು; ನಿಷ್ಕ್ರೀಯವಾದ ಮತ್ತು ದುರಾಡಳಿತದಿಂದ ಸರಿಯಾಗಿ ನಡೆಯದ ಸಂಘಗಳೆಷ್ಟು;	ರಾಜ್ಯದಲ್ಲಿ ದಿನಾಂಕ:31.03.2021ರ ಅಂತ್ಯಕ್ಕೆ ಒಟ್ಟು 1828 ಗೃಹ ನಿರ್ಮಾಣ ಸಹಕಾರ ಸಂಘಗಳು ಇದ್ದು, 1187 ಕಾರ್ಯನಿರತ, 279 ಸ್ಥಗಿತ ಮತ್ತು 362 ಗೃಹ ನಿರ್ಮಾಣ ಸಹಕಾರ ಸಂಘಗಳು ಸಮಾಪನೆಯಲ್ಲಿರುತ್ತವೆ.
ಆ)	ಬೆಂಗಳೂರು ಸುತ್ತಮುತ್ತ ಜಮೀನುಗಳ ಇಲ್ಲದಿರುವಾಗ ಸದಸ್ಯರಿಗೆ ಹಂಚಲು ನಿವೇಶನ ಮಾಡದ ಪರಿಸ್ಥಿತಿ ಇರುವಾಗ ಬೆಂಗಳೂರು ನಗರದಲ್ಲಿರುವ ಈ ಗೃಹ ನಿರ್ಮಾಣ ಸಹಕಾರ ಸಂಘಗಳು ಯಾವ ರೀತಿ ಕಾರ್ಯನಿರ್ವಹಿಸುತ್ತದೆ; ಯಾವ ಯಾವ ಚಟುವಟಿಕೆಗಳನ್ನು ನಡೆಸುತ್ತದೆ?	ಗೃಹ ನಿರ್ಮಾಣ ಸಹಕಾರ ಸಂಘಗಳು ತಮ್ಮ ಉಪನಿಯಮಗಳಲ್ಲಿ ಅವಕಾಶ ಮಾಡಿಕೊಂಡಂತೆ ಕಾರ್ಯವ್ಯಾಪ್ತಿಗನುಗುಣವಾಗಿ ಬೆಂಗಳೂರಿನ ಹೊರ ವಲಯದಲ್ಲಿ ಬಡಾವಣೆ ರಚಿಸಲು ಅವಕಾಶವಿರುತ್ತದೆ. ಅದರಂತೆ ಬಡಾವಣೆ ನಿರ್ಮಿಸಿ ನಿವೇಶನಗಳನ್ನು ರಚಿಸಲು ಕ್ರಮ ಕೈಗೊಂಡಿರುತ್ತಾರೆ. ಗೃಹ ನಿರ್ಮಾಣ ಸಹಕಾರ ಸಂಘಗಳು ಉಪನಿಯಮಗಳ ಅವಕಾಶಗಳ ರೀತ್ಯಾ ಬಡಾವಣೆ ಅಭಿವೃದ್ಧಿಪಡಿಸಿ ತನ್ನ ಸದಸ್ಯರಿಗೆ ನಿವೇಶನ ಹಂಚಿಕೆ/ನೋಂದಣಿ ಮಾಡುವುದು, ಫ್ಲ್ಯಾಟ್ ಗಳನ್ನು ನಿರ್ಮಿಸುವುದು, ಗೃಹ ನಿರ್ಮಾಣ ಹಾಗೂ ರಿಪೇರಿಗಾಗಿ ಸಾಲ ನೀಡುವ ಚಟುವಟಿಕೆಗಳನ್ನು ನಡೆಸುತ್ತಿವೆ.

ಸಿಒ 40 ಸಿಹೆಚ್ಎಸ್ 2021 (ಇ)

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು